**ದಿನಾಂಕ: 03.06.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**
**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದ:**

ನನ್ನ ಸಾಕ್ಷಿ ವಿಚಾರಣೆ, ಹೇಳಿಕೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯ ಎಲ್ಲಾ ಸತ್ಯವಾಗಿರುತ್ತದೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸುತ್ತಿದ್ದೇನೆ.

| |
|---|
| ಪ್ರಥಮ ವರ್ತಮಾನ ವರದಿಯ ನಕಲು ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು **ನಿ.ಪಿ.1** ಎಂದು, |
| ದೂರಿನ ನಕಲು ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು **ನಿ.ಪಿ.2** ಎಂದು, |
| ಸ್ಥಳ ಪಂಚನಾಮೆಯನಕಲು ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು **ನಿ.ಪಿ.3** ಎಂದು, |
| ನಕ್ಷೆಯ ನಕಲು ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು **ನಿ.ಪಿ.4** ಎಂದು, |
| ಮೋಟಾರು ವಾಹನ ಕಾಯ್ದೆಯ ಕಲಂ 133 ರಡಿ ನೀಡಿರುವ ನೋಟೀಸಿನ ನಕಲು ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು **ನಿ.ಪಿ.5** ಎಂದು, |
| ಪ್ರತ್ಯುತ್ತರ ನೋಟೀಸನ್ನು ಹಾಜರುಪಡಿಸುತ್ತಿದ್ದು ಅದನ್ನು **ನಿ.ಪಿ.6** ಎಂದು |
| ಐ.ಎಂ.ವಿ ವರದಿಯ ನಕಲು ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು **ನಿ.ಪಿ.7** ಎಂದು, |
| ಪೊಲೀಸ್ ಇಂಟಿಮೇಶನ್ ನ ನಕಲು ಪ್ರತಿಯನ್ನು ಹಾಜರುಪಡಿಸುತ್ತಿದ್ದು **ನಿ.ಪಿ.8** ಎಂದು, |
| ಗಾಯದ ಪ್ರಮಾಣ ಪತ್ರದ ನಕಲು ಪ್ರತಿಯನ್ನು ಹಾಜರುಪಡಿಸುತ್ತಿದ್ದು **ನಿ.ಪಿ.9** ಎಂದು, |
| ಚಾರ್ಜ್ ಶೀಟಿನ ನಕಲು ಪ್ರತಿಯನ್ನು ಹಾಜರುಪಡಿಸುತ್ತಿದ್ದು **ನಿ.ಪಿ.10** ಎಂದು, |
| ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸುತ್ತಿದ್ದು **ನಿ.ಪಿ.11** ಎಂದು, |
| ಆಧಾರ್ ಕಾರ್ಡಿನ ನೋಟರೀಕೃತ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಮೂಲ ದಾಖಲೆಯೊಂದಿಗೆ ಪರಿಶೀಲಿಸಿ ನೋಟರಿ ಪ್ರತಿಯನ್ನು **ನಿ.ಪಿ.12** ಎಂದು, (ಮೂಲ ದಾಖಲೆಯನ್ನು ಪರಿಶೀಲಿಸಿ ಸಾಕ್ಷಿಗೆ ಹಿಂತಿರುಗಿಸಲಾಯಿತು.) |
| 46 prescriptions ಹಾಜರುಪಡಿಸುತ್ತಿದ್ದು ಅವುಗಳನ್ನು ಒಟ್ಟಾಗಿ **ನಿ.ಪಿ.13** ಎಂದು, |
| 25 ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಒಟ್ಟಾಗಿ **ನಿ.ಪಿ.14** ಎಂದು ಗುರುತಿಸಲಾಯಿತು. |

ಅರ್ಜಿಯಲ್ಲಿ ಕೋರಿರುವಂತೆ ಆದೇಶ ಮಾಡಬೇಕೆಂದು ಕೋರುತ್ತೇನೆ.

**ಪಾಟೀ ಸವಾಲುಃ**

1 ನೇ ಎದುರುದಾರರ ಏಕತರ್ಫಿ ಇರುವುದರಿಂದ ಮತ್ತು 2 ನೇ ಎದುರುದಾರ ತಕರಾರು ಸಲ್ಲಿಸದೇ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**(ಶ್ರೀಮತಿ. ನಿರ್ಮಲ ಎಂ.ಸಿ)**
ಎಸಿಜೆಎಂ ನ್ಯಾಯಾಧೀಶರು
ಲಘು ವ್ಯವಹಾರಗಳ ನ್ಯಾಯಾಲಯ
ಬೆಂಗಳೂರು.